ಕರ್ನಾಟಕ ವಿಧಾನಸಭೆ

ಶುಕ್ರವಾರ 26ನೇ ಮಾರ್ಚ್ 1999ರಂದು ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಬೆಳಗ್ಗೆ 10.20 ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು (ಶ್ರೀ ರಮೇಶ್ ಕುಮಾರ್)ಅವರು ಪೀಠವನ್ನು ಅಲಂಕರಿಸಿದ್ದರು.

1. ಪ್ರಶ್ನೋತ್ತರಗಳು

ಅ) ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು.

ಬಾದಾಮಿ ಬಸ್ ನಿಲ್ದಾಣ.

183(1313) ಶ್ರೀ ಬಿ.ಬಿ. ಚಿಮ್ಮನಕಟ್ಟಿ (ಬಾದಾಮಿ) :— ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1) ಬಾದಾಮಿ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿ ಪ್ರಯಾಣಿಕರಿಗೆ ಅನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಬಾದಾಮಿಯು ದೇಶದ ಪ್ರೇಕ್ಷಣೀಯ ಸ್ಥಳಗಳಲ್ಲೊಂದಾಗಿರುವುದರಿಂದ ಇಲ್ಲಿಯ ಬಸ್ ನಿಲ್ದಾಣವನ್ನು ಅಭಿವೃದ್ಧಿಗೊಳಿಸಲು ಸರ್ಕಾರವು ಕೂಡಲೇ ಕ್ರಮಕ್ಕೆಗೊಳ್ಳುವುದೇ?

ಶ್ರೀ ಬಿ.ಎನ್. ಬಚ್ಚೇಗೌಡ (ಸಾರಿಗೆ ಸಚಿವರು) :—

1) ಹೌದು.

2) ಈಗಾಗಲೇ ಹಾಲಿ ಬಾದಾಮಿಯಲ್ಲಿರುವ ಬಸ್ ನಿಲ್ದಾಣವನ್ನು ಅಭಿವೃದ್ಧಿಗೊಳಿಸಲು ಯೋಜನೆ ರೂಪಿಸಲಾಗಿದ್ದು, ಬಸ್ ನಿಲ್ದಾಣವನ್ನು ವಿಸ್ತರಿಸಲು ಕ್ರಮ ಕೈಗೊಳ್ಳಲಾಗಿದ್ದು, 5.25 ಲಕ್ಷ ರೂ. ಅಂದಾಜುಪಟ್ಟಿಯನ್ನು ತಯಾರಿಸಲಾಗಿದ್ದು, ಬಸ್ ನಿಲ್ದಾಣವನ್ನು ವಿಸ್ತರಿಸಲು ಕ್ರಮ ಕೈಗೊಳ್ಳಲಾಗಿದೆ.

ಶ್ರೀ ಚಿಮ್ಮನಕಟ್ಟಿ ಬಾಳಪ್ಪ ಭೀಮಪ್ಪ :— ಮಾನ್ಯ ಅಧ್ಯಕ್ಷರೆ, ಬಾದಾಮಿ ಬಸ್ ನಿಲ್ದಾಣವನ್ನು ಅಭಿವೃದ್ಧಿಗೊಳಿಸಲು 5 ಲಕ್ಷದ 25 ಸಾವಿರ ರೂಪಾಯಿಗಳನ್ನು ಕೊಡಲಾಗಿದೆಯೆಂದು ಹೇಳಿದ್ದಾರೆ. ಇದರಲ್ಲಿ ಯಾವ್ಯಾವ ಕಾಮಗಾರಿಗಳು ಸೇರಿದೆ ಎಂಬ ಬಗ್ಗೆ ಹೇಳುತ್ತೀರಾ?

ಶ್ರೀ ಸಿ. ಬೈರೇಗೌಡ :— ಮಾನ್ಯ ಅಧ್ಯಕ್ಷರೆ, ಅಲ್ಲಿ ಬಸ್ ನಿಲ್ದಾಣಕ್ಕೆ ಇರುವ ಸ್ಥಳಾವಕಾಶ ಕಡಿಮೆ ಇದೆಯೆಂದು ಗಮನಿಸಲಾಗಿದೆ. ಅಲ್ಲಿ ಸುಮಾರು 200 ಚದರ ಮೀಟರ್‌ನಷ್ಟು ವಿಸ್ತಾರಗೊಳಿಸಲು ಈ ಹಣವನ್ನು ಖರ್ಚು ಮಾಡಬೇಕೆಂದಿದ್ದೇವೆ. ರಸ್ತೆ, ಶೆಲ್ಟರ್, ಬಸ್ ಸ್ಟ್ಯಾಂಡ್‌ನಲ್ಲಿ ಮೂಲಭೂತವಾಗಿ ಏನೇನು ಇರಬೇಕೋ ಅವೆಲ್ಲವನ್ನೂ ಮಾಡುವುದಕ್ಕೆ ಹಣವನ್ನು ಖರ್ಚು ಮಾಡಲು ಉದ್ದೇಶಿಸಿದ್ದೇವೆ.

ಶ್ರೀ ಚಿಮ್ಮನಕಟ್ಟಿ ಬಾಳಪ್ಪ ವೀರಪ್ಪ :— ಬಾದಾಮಿಯು ಐತಿಹಾಸಿಕವಾದ ಸ್ಥಳ. ಪ್ರವಾಸಿಗರ ಸಂಖ್ಯೆ ಜಾಸ್ತಿಯಾಗಿರುತ್ತದೆ. ಬಸ್ ಸ್ಟ್ಯಾಂಡ್‌ನಲ್ಲಿ ಶೆಲ್ಟರ್ ಇಲ್ಲದಿರುವುದರಿಂದ ಬಿಸಿಲಿನ ತಾಪದಿಂದ ಪ್ರಯಾಣಿಕರಿಗೆ ತೊಂದರೆ ಇದೆ. ಅಲ್ಲಿ ಈಗಾಗಲೇ ದೊಡ್ಡ ಕಟ್ಟೆಯನ್ನು ಕಟ್ಟಿದ್ದಾರೆ. ಅದಕ್ಕೆ ಮೇಲ್ಚಾವಣಿ ಕಟ್ಟಿದರೆ ನೆರಳು ಬರುತ್ತದೆ. ಇದರಿಂದ ಪ್ರಯಾಣಿಕರಿಗೆ ಅನುಕೂಲವಾಗುತ್ತದೆ. ಆ ಮೇಲ್ಚಾವಣಿ ಮಾಡಲು ಬಹಳ ಖರ್ಚು ಆಗುವುದಿಲ್ಲ. ಎರಡು ಮೂರು ಲಕ್ಷ ರೂ.ವಾಗಬಹುದು. ದಯವಿಟ್ಟು ತಾವು ಆ ಕೆಲಸವನ್ನು ಮಾಡಲು ಒಪ್ಪಿದರೆ ದೊಡ್ಡ ಸಹಾಯ ಮಾಡಿದಂತಾಗುತ್ತದೆ.

ಶ್ರೀ ಸಿ. ಬೈರೇಗೌಡ :— ಅಲ್ಲಿ ಬಸ್ ಟ್ರಿಪ್‌ಗಳು ಸುಮಾರು 250 ದಿನನಿತ್ಯ ಇದೆ. ಬಸ್ ಸ್ಟ್ಯಾಂಡ್‌ನಲ್ಲಿ ಮೇಲ್ಚಾವಣಿ ಇರಬೇಕಾದುದು ಅವಶ್ಯಕವಾಗಿರುತ್ತದೆ. ಮೇಲ್ಚಾವಣಿಯೇ ಇಲ್ಲದಿರುವುದು ಬಸ್ ಸ್ಟ್ಯಾಂಡ್ ಹೇಗೆ ಆಗುತ್ತದೆ? ಆ ಕೆಲಸವನ್ನು ಮಾಡುವ ಪ್ರಯತ್ನವನ್ನು ಸಂಸ್ಥೆಯವರು ಮಾಡುತ್ತಾರೆಂದು ಹೇಳಬಯಸುತ್ತೇನೆ.

ಶ್ರೀ ಚಿಮ್ಮನಕಟ್ಟಿ ಬಾಳಪ್ಪ ಭೀಮಪ್ಪ :— ಬಾದಾಮಿ, ಪಟ್ಟದಕಲ್ಲು, ಐಹೊಳೆಗಳು ಐತಿಹಾಸಿಕವಾಗಿ ಬಹಳ ಪ್ರಸಿದ್ಧವಾದ ಸ್ಥಳಗಳು. ಇಂಥ ಸ್ಥಳಗಳನ್ನು ನೋಡಲು ಬೆಂಗಳೂರಿನಿಂದ ಬರಲು ಬಸ್‌ಗಳ ಸೌಲಭ್ಯ ಇರುವುದಿಲ್ಲ. ಆದ್ದರಿಂದ ಬೆಂಗಳೂರಿನಿಂದ ಒಂದು ಸೂಪರ್ ಡೀಲಕ್ಸ್ ಬಸ್ಸನ್ನು ಬಿಟ್ಟರೆ ಅನುಕೂಲವಾಗುತ್ತದೆ.

ಅಧ್ಯಕ್ಷರು :— ಸಂಬಂಧಪಟ್ಟ ಸಚಿವರು ಇಲ್ಲ. ಅವರ ಪರವಾಗಿ ಬೈರೇಗೌಡರು ಉತ್ತರ ಕೊಡುತ್ತಿದ್ದಾರೆ. ಆದ್ದರಿಂದ ಸಾರಿಗೆ ಸಚಿವರಾದ ಬಚ್ಚೇಗೌಡರು ಬಂದಮೇಲೆ ನಾವುಗಳು ಕುಳಿತುಕೊಂಡು ಮಾತನಾಡೋಣ. ಅಲ್ಲಿಗೆ ಬೆಂಗಳೂರಿನಿಂದ ಸೂಪರ್ ಡೀಲಕ್ಸ್ ಬಸ್ಸನ್ನು ಹಾಕಿಸುವ ಏರ್ಪಾಡು ಮಾಡೋಣ.

ಚಿಕ್ಕಮಗಳೂರಿನಲ್ಲಿ ಕರ್ನಾಟಕ ಗೃಹಮಂಡಳಿಯ ನಿರ್ಮಿಸಿರುವ ಮನೆಗಳು.

186 (853) ಶ್ರೀ ಸಿ.ಆರ್. ಸಗೀರ್ ಅಹಮದ್ (ಚಿಕ್ಕಮಗಳೂರು) :— ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಚಿಕ್ಕಮಗಳೂರು ಕ್ಷೇತ್ರದ ನಗರಸಭೆಯ ವ್ಯಾಪ್ತಿಯಲ್ಲಿ ಕರ್ನಾಟಕ ಗೃಹಮಂಡಳಿಯಿಂದ ನಿರ್ಮಿಸಿರುವ ಮನೆಗಳ ಸಂಖ್ಯೆ ಎಷ್ಟು ;